ಕರ್ನಾಟಕ ಸರ್ಕಾರ

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗರಸ್ತೆ, ಬೆಂಗಳೂರು**

**ಸಂಖ್ಯೆ: ಸಿ1(5)ಪ್ರೌ.ಶಿ.ಸ್ಥಾ.ಪ.ಬಡ್ತಿ/04/2020-21** **ದಿನಾಂಕ: 16/10/2020**

**ಜ್ಞಾಪನ**

**ವಿಷಯ :** ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೇಡ್-2 ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ಗ್ರೂಪ್-ಬಿ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡುವ ಕುರಿತು.

**ಉಲ್ಲೇಖ :** 1) ಇಲಾಖಾ ಮುಂಬಡ್ತಿ ಸಭೆ ದಿನಾಂಕ:09/09/2020
2)ಮಾನ್ಯ ಆಯುಕ್ತರ ಆದೇಶ ದಿನಾಂಕ: 24/09/2020
3) ಮೈಸೂರು ವಿಭಾಗದ ಉಪನಿರ್ದೇಶಕರು(ಆಡಳಿತ) ರವರಿಂದ ಬಂದಿರುವ ಪ್ರಸ್ತಾವನೆಗಳಂತೆ

*********

ಸಾರ್ವಜನಿಕ ಶಿಕ್ಷಣ ಇಲಾಖೆಯ ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಯಿಂದ ಪ್ರೌಢಶಾಲಾ ಗ್ರೂಪ್-ಬಿ ವೃಂದದ ಖಾಲಿ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡಲು ಅರ್ಹ ಸಹ ಶಿಕ್ಷಕರ ಪಟ್ಟಿಯನ್ನು ಪ್ರಕಟಿಸಲಾಗಿತ್ತು. ಸದರಿ ಅರ್ಹತಾ ಪಟ್ಟಿಯಲ್ಲಿಯಲ್ಲಿರುವ ಶಿಕ್ಷಕರಿಗೆ ಬಡ್ತಿಯನ್ನು ಹೊಂದಲು ಇಚ್ಛಿಸದಿದ್ದಲ್ಲಿ ಉಲ್ಲೇಖ-1ರ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಯ ಅನುಮೋದಿತ ಪಟ್ಟಿ ಪ್ರಕಟಿಸಿದ ದಿನಾಂಕದಿಂದ 10 ದಿವಸಗಳ ಒಳಗಾಗಿ ನೀಡಲಾದ ಬಡ್ತಿಯನ್ನು ಬಿಟ್ಟುಕೊಡಲು ಸಕ್ಷಮ ಪ್ರಾಧಿಕಾರದ ಮೂಲಕ ಲಿಖಿತ ಮನವಿಯನ್ನು ಸಲ್ಲಿಸಲು ತಿಳಿಸಲಾಗಿತ್ತು.

ಅದರಂತೆ 73 ಸಹ ಶಿಕ್ಷಕರು ಮುಖ್ಯ ಶಿಕ್ಷಕರ ವೃಂದದ ಹುದ್ದೆಗಳಿಗೆ ಬಡ್ತಿ ಹೊಂದಲು ನಿರಾಕರಿಸಿ ಸಕ್ಷಮ ಪ್ರಾಧಿಕಾರದ ಮೂಲಕ ಲಿಖಿತವಾಗಿ ಮನವಿ ಸಲ್ಲಿಸಿರುತ್ತಾರೆ. ಬಡ್ತಿ ನಿರಾಕರಿಸಿರುವ ಸಹ ಶಿಕ್ಷಕರುಗಳನ್ನು ಹೊರತುಪಡಿಸಿ, ಉಳಿದ ಅರ್ಹ ಸಹ ಶಿಕ್ಷಕರುಗಳಿಗೆ ಮುಖ್ಯ ಶಿಕ್ಷಕರ ವೃಂದದ ಹುದ್ದೆಗೆ ಬಡ್ತಿ ನೀಡುವ ಸಂಬಂಧ ಸ್ಥಳ ನಿಯುಕ್ತಿ ಗಣಕೀಕೃತ ಕೌನ್ಸಿಲಿಂಗ್ ದಿನಾಂಕವನ್ನು ಈ ಕೆಳಕಂಡಂತೆ ನಿಗಧಿಪಡಿಸಲಾಗಿದೆ. ಅರ್ಹ ಸಹ ಶಿಕ್ಷಕರ ಪಟ್ಟಿಯನ್ನು ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಕೋವಿಡ್-19 ರ ಹರಡುವಿಕೆಯನ್ನು ತಡೆಯುವ ಕಾರಣದಿಂದ ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವ ನಿಟ್ಟಿನಿಂದ ಈ ಕೆಳಕಂಡ ಶಿಕ್ಷಕರುಗಳು ಮುಂಬಡ್ತಿ ಸಂಬಂಧ ಮುಖ್ಯ ಶಿಕ್ಷಕರ ಹುದ್ದೆಯಲ್ಲಿ ಸ್ಥಳ ಆಯ್ಕೆ ಮಾಡಿಕೊಳ್ಳುವ ಸಲುವಾಗಿ ದಿನಾಂಕ:27/10/2020 ರಿಂದ 29.10.2020 ರಂದು 3 ದಿನಗಳನ್ನು ನಿಗಧಿಪಡಿಸಲಾಗಿದೆ.

ಕೌನ್ಸಲಿಂಗ್‌ಗೆ ಹಾಜರಾಗುವಾಗ ಪ್ರತಿಯೊಬ್ಬ ಶಿಕ್ಷಕರು ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳುವುದು, ಕೈಗವಚ (ಗ್ಲೌಸ್) ಹಾಗೂ ಮುಖ ಗವಸು (ಮಾಸ್ಕ್) ಧರಿಸುವುದು ಕಡ್ಡಾಯವಾಗಿರುತ್ತದೆ, ಕೌನ್ಸಿಲಿಂಗ್‌ಗೆ ಹಾಜರಾಗುವ ಶಿಕ್ಷಕರಿಗೆ ಯಾವುದೇ ಪ್ರಯಾಣ ಭತ್ಯೆ ಅಥವಾ ಇನ್ನಾವುದೆ ಭತ್ಯೆಗೆ ಅರ್ಹರಿರುವುದಿಲ್ಲ.ಕೌನ್ಸಿಲಿಂಗ್‌ಗೆ ಗೈರು ಹಾಜರಾಗುವಂತಹ ಶಿಕ್ಷಕರನ್ನು ಡಮ್ಮಿ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗುವುದು

ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 18 ಸೇನೌವ 2014 ದಿನಾಂಕ:6.02.2014 ರಂತೆ ಅಂಗವಿಕಲ ನೌಕರರಿಗೆ ಆಧ್ಯತೆ ನೀಡಬೇಕಾಗಿದ್ದು, ಕೌನ್ಸಲಿಂಗ್‌ಗೆ ಹಾಜರಾಗುವಾಗ ಅಂಗವಿಕಲ ಅಭ್ಯರ್ಥಿಗಳು ಅಧಿಕೃತ ಮೂಲ ಪ್ರಮಾಣ ಪತ್ರದೊಂದಿಗೆ ಹಾಜರಾಗವುದು.

**ಕೌನ್ಸಿಲಿಂಗ್ ಸ್ಥಳ:** **ಶಿಕ್ಷಕರ ಸದನ, ಕೆ.ಜಿ.ರಸ್ತೆ, ಬೆಂಗಳೂರು-560 002**

| ದಿನಾಂಕ | ಪಟ್ಟಿ ಕ್ರಮ ಸಂಖ್ಯೆ ರಿಂದ(ಪೂರ್ವಾಹ್ನ) | ಪಟ್ಟಿ ಕ್ರಮ ಸಂಖ್ಯೆ ರವರೆಗೆ ಅಪರಾಹ್ನ |
|---|---|---|
| 27/10/2020 | 1-30 | 31-75 |
| 28/10/2020 | 76-150 | 151-225 |
| 29/10/2020 | 226-300 | 300 ರಿಂದ ಉಳಿದ ಶಿಕ್ಷಕರು |

(ಅನ್ಬುಕುಮಾರ್ ವಿ)
ಆಯುಕ್ತರು

ಪ್ರತಿಯನ್ನು

1) ಮಾನ್ಯ ನಿರ್ದೇಶಕರು(ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ
2) ಕಾರ್ಯದರ್ಶಿ ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಮೈಸೂರು ವಿಭಾಗ, ಮೈಸೂರು ಇವರಿಗೆ ಮಾಹಿತಿಗಾಗಿ
3)ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕರು(ಆಡಳಿತ) ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕೆ ಹಾಗೂ ಸಂಬಂಧಿಸಿದ ಅರ್ಹ ಶಿಕ್ಷಕರಿಗೆ ಕೌನ್ಸಿಲಿಂಗ್‌ಗೆ ಹಾಜರಾಗಲು ಸೂಚಿಸುವುದು
4)ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ